**9ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ. 123 / 2018**

**(ಪ್ರಾ.ಸಾ.9 / ಚಾ.ಸಾ.5)**

ತಾಃ 21-03-2019 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಚಂದ್ರಶೇಖರ |
| ತಂದೆಯ ಹೆಸರು/ ಗಂಡನ ಹೆಸರು | ಃ | ಲೇಟ್ ರಾಮಕೃಷ್ಣ |
| ವಯಸ್ಸು | ಃ | 32 ವರ್ಷ |
| ಉದ್ಯೋಗ | ಃ | ಖಾಸಗಿ ಕೆಲಸ |
| ವಾಸ ಸ್ಥಳ | ಃ | ಬೇಗೂರು |

**ಮುಖ್ಯ ವಿಚಾರಣೆ ಃ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿ ನಿ.ಪಿ 2ರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದನ್ನು ನಿ.ಪಿ 2ಸಿ ಎಂದು ಗುರುತಿಸಲಾಯಿತು. 2017ನೇ ಇಸವಿಯಲ್ಲಿ ನಾನು ಎಲೆಕ್ಟ್ರಾನಿಕ್ ಸಿಟಿ ಪೋಲೀಸ್ ಠಾಣೆ ಬಳಿ ಹೋಗುತ್ತಿದ್ದಾಗ ಪೋಲೀಸರು ನನ್ನನ್ನು ಕರೆದು ಸಹಿ ಪಡೆದಿದ್ದಾರೆ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಸರ್ಕಾರಿ ಅಭಿಯೋಜಕರು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರವರಿಂದಃ-**

ದಿನಾಂಕಃ 10-01-2017ರಂದು ಮಧ್ಯಾಹ್ನ 1.30ರಿಂದ 2.30ಗಂಟೆ ಸಮಯದಲ್ಲಿ ಎಲೆಕ್ಟ್ರಾನಿಕ್ ಸಿಟಿ ಪೋಲೀಸರು ನೈಸ್ ರಸ್ತೆಯ ಕೃತ್ಯ ನಡೆದ ಸ್ಥಳದಲ್ಲಿ ಪಿರ್ಯಾದಿ ಲಿಂಗರಾಜು ತೋರಿಸಿದ ಜಾಗದಲ್ಲಿ ಮಹಜರ್ ಮಾಡಿ ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಃ**

ಇಲ್ಲ ಎಂದು ನುಡಿದಿದ್ದಾರೆ.

{ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ.}

ಓ. ಹೇ. ಸಾ. ಸ. ಸಹಿ ಮಾಡಿದ್ದಾರೆ.

(ಜೆ.ವಿ ವಿಜಯಾನಂದ)
9ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.